**<u>ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬೆಂಗಳೂರು ಗ್ರಾಮಾಂತರ ಜಿಲ್ಲೆ,</u>**
**<u>ಸಿಟಿ ಸಿವಿಲ್ ನ್ಯಾಯಾಲಯಗಳ ಸಂಕೀರ್ಣ, ಬೆಂಗಳೂರು - 560 009</u>**

**<u>ಅಧಿಸೂಚನೆ ಸಂಖ್ಯೆ: ಎಡಿಎಂ/99/2026 ದಿನಾಂಕ: 10.08.2026</u>**

ವಿಷಯ : ಶೀಘ್ರಲಿಪಿಗಾರ ಗ್ರೇಡ್- III (Stenographer Grade-III) ಹುದ್ದೆಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸುತ್ತಿರುವ ಬಗ್ಗೆ.

ಉಲ್ಲೇಖ :1. Karnataka Subordinate Courts (Ministerial and Other Posts)(Recruitment)(Amendment) Rules, 2021

2. ಸರ್ಕಾರಿ ಆದೇಶ ಸಂಖ್ಯೆ LAW 01 LAC 2005, ಬೆಂಗಳೂರು, ದಿನಾಂಕ: 13.02.2008

3. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 149 ಎಸ್.ಆರ್.ಆರ್ 2020, ಬೆಂಗಳೂರು, ದಿನಾಂಕ: 25.09.2020

4. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 02 ಸೇಹಿಮ 2023, ಬೆಂಗಳೂರು, ದಿನಾಂಕ: 08.03.2023

5. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 262 ಸೇನೆನಿ 2025, ಬೆಂಗಳೂರು, ದಿನಾಂಕ: 29.01.2026

6. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 02 ಸೇಹಿಮ 2026, ಬೆಂಗಳೂರು, ದಿನಾಂಕ: 13.05.2026

7. ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿನ ಪತ್ರ ಸಂಖ್ಯೆ: DJA-II (LCA-II)-128/2012 ದಿನಾಂಕ 11.09.2023

8. ಈ ಕಚೇರಿ ಟಿಪ್ಪಣಿಗಳ ಮೇಲಿನ ಆದೇಶಗಳು

<> <> <>

ಬೆಂಗಳೂರು ಗ್ರಾಮಾಂತರ ಜಿಲ್ಲಾ ನ್ಯಾಯಾಲಯ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರ ಗ್ರೇಡ್- III (Stenographer Grade-III) ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ **<u>ಆನ್‌ಲೈನ್ ಮೂಲಕ ಅರ್ಜಿಗಳನ್ನು</u>** ಆಹ್ವಾನಿಸಲಾಗಿದೆ.

**ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 15.09.2026**

ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ವೆಬ್‌ಸೈಟ್ ಲಿಂಕ್:
https://bengalururural.dcourts.gov.in/online-recruitment/ ಅರ್ಜಿಗಳನ್ನು ಮೇಲ್ಕಂಡ ನಿಗದಿತ ಸೂಚಿತ ವೆಬ್ ಸೈಟ್ ಮೂಲಕ ಆನ್‌ಲೈನ್ ನಲ್ಲಿ ದಿನಾಂಕ **17.08.2026 ರಿಂದ 15.09.2026 ರ ರಾತ್ರಿ 11:59** ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ **15.09.2026** ಆಗಿರುತ್ತದೆ.

ಆನ್‌ಲೈನ್ ಹೊರತುಪಡಿಸಿ, ಖುದ್ದಾಗಿ, ಅಂಚೆ ಮೂಲಕ ಅಥವಾ ಇನ್ನ್ಯಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಈ ಅಧಿಸೂಚನೆಯು ಮತ್ತು ಇದರ ಅನ್ವಯ ನೇಮಕಾತಿಯು ರಿಟ್ ಅರ್ಜಿ ಸಂಖ್ಯೆ: 200448/2025 c/w 17968/2025 ಮತ್ತು 3145/2023 ಗಳಲ್ಲಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ನೀಡುವ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ.

**01. ಹುದ್ದೆಯ ಹೆಸರು:** ಶೀಘ್ರಲಿಪಿಗಾರ ಗ್ರೇಡ್- III (Stenographer Grade-III)

**02. ಹುದ್ದೆಗಳ ಸಂಖ್ಯೆ:** ಒಟ್ಟು ಹುದ್ದೆಗಳು 21 (04 ಹಿಂಬಾಕಿ ಹುದ್ದೆ ಮತ್ತು 17 ಹೊಸ ಹುದ್ದೆಗಳು)

**03. ವೇತನ ಶ್ರೇಣಿ:** ರೂ.44425-1125-47800-1250-52800-1375-58300-1500-64300-1650-74200-1900-83700

**04. ಹುದ್ದೆಗಳ ವರ್ಗೀಕರಣ:**

**(1) ಹಿಂಬಾಕಿ ಹುದ್ದೆಗಳು (ಬ್ಯಾಕ್ ಲಾಗ್):**

| ವರ್ಗೀಕರಣ | ಮಹಿಳೆ | ಗ್ರಾಮೀಣ | ಅಂಗವಿಕಲ | ಒಟ್ಟು |
|---|---|---|---|---|
| ಪರಿಶಿಷ್ಟ ಜಾತಿ | | 01 | 01* | 02 |
| ಪ್ರವರ್ಗ 1 | | 01 | | 01 |
| ಪ್ರವರ್ಗ 2 ಎ | | | 01* | 01 |
| ಒಟ್ಟು | | 02 | 02 | 04 |

*ಸೂಚನೆಃ ಪರಿಶಿಷ್ಟ ಜಾತಿ ಮತ್ತು ಪ್ರವರ್ಗ – 2ಎ ಪ್ರವರ್ಗಗಳ ಮೇಲ್ಕಂಡ ಹಿಂಬಾಕಿ ಹುದ್ದೆಯು ದೃಷ್ಟಿಮಾಂದ್ಯ ಅಂಗವಿಕಲ ಅಭ್ಯರ್ಥಿಗಳಿಗೆಂದು ಮೀಸಲಿರಿಸಲಾಗಿದೆ. ಅಧಿಸೂಚಿತ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ, ಆಯಾ ಪ್ರವರ್ಗದ ಇತರ ಅಂಗವೈಕಲ್ಯವನ್ನುಳ್ಳ ಅಭ್ಯರ್ಥಿಗಳನ್ನು ಅಥವಾ ಆಯಾ ಪ್ರವರ್ಗದ ಇತರೆ ಅರ್ಹ ಅಭ್ಯರ್ಥಿಯನ್ನು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 02 ಸೆಹಿಮ 2023 ದಿನಾಂಕ 08.03.2023 ರ ಅನುಸಾರ ಪರಿಗಣಿಸಲಾಗುವುದು.

**(2) ಹೊಸ ಹುದ್ದೆಗಳುಃ**

| ಪ್ರವರ್ಗ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ಅಂಗ ವಿಕಲ | ತೃತೀಯ ಲಿಂಗ | **ಒಟ್ಟು** |
|---|---|---|---|---|---|---|---|---|---|
| ಪರಿಶಿಷ್ಟ ಜಾತಿ - (ಪ್ರವರ್ಗ - ಎ) | 1 | - | - | - | - | - | - | - | **1** |
| ಪರಿಶಿಷ್ಟ ಜಾತಿ (ಪ್ರವರ್ಗ - ಬಿ) | 1 | - | - | - | - | - | - | - | **1** |
| ಪರಿಶಿಷ್ಟ ಜಾತಿ (ಪ್ರವರ್ಗ - ಸಿ) | 1* | - | - | - | - | - | - | - | **1** |
| ಪರಿಶಿಷ್ಟ ಪಂಗಡ | 1 | - | - | - | - | - | - | - | **1** |
| ಪ್ರವರ್ಗ-1 | 1 | - | - | - | - | - | - | - | **1** |
| ಪ್ರವರ್ಗ - 2ಎ | 1 | 1 | - | - | - | - | - | - | **2** |
| ಪ್ರವರ್ಗ – 2 ಬಿ | 1 | - | - | - | - | - | - | - | **1** |
| ಪ್ರವರ್ಗ - 3ಎ | - | - | - | - | - | - | - | - | **-** |
| ಪ್ರವರ್ಗ - 3ಬಿ | 1 | - | - | - | - | - | - | - | **1** |
| ಸಾಮಾನ್ಯ ಅರ್ಹತೆ | 2 | 3 | 2 | - | - | - | 1** | - | **8** |
| **ಒಟ್ಟು** | **10** | **4** | **2** | **-** | **-** | **-** | **1** | **-** | **17** |

* ಪರಿಶಿಷ್ಟ ಜಾತಿ (ಪ್ರವರ್ಗ – ಸಿ) ಗೆ ಲಭ್ಯವಿರುವ ಹುದ್ದೆಯನ್ನು ಸದರಿ ಪ್ರವರ್ಗದ 59 ಅತಿ ಹಿಂದುಳಿದ ಜಾತಿಯ ಅಭ್ಯರ್ಥಿಗಳಿಗೆ ಮೀಸಲಿರಿಸಲಾಗಿದೆ. ಆ 59 ಅತಿ ಹಿಂದುಳಿದ ಜಾತಿಯ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಸದರಿ ಪ್ರವರ್ಗ-ಸಿ ಯ ಇತರೆ ಜಾತಿಯ ಅರ್ಹ ಅಭ್ಯರ್ಥಿಗಳನ್ನು ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 02 ಸೆಹಿಮ 2026 ದಿನಾಂಕ 13.05.2026 ರ ಅನುಸಾರ ಪರಿಗಣಿಸಲಾಗುವುದು.

** ಅಂಗವಿಕಲರಿಗೆಂದು ಮೀಸಲಿರಿಸಲಾದ ಹುದ್ದೆಗಳ ವರ್ಗೀಕರಣಃ

| ಪ್ರವರ್ಗ | ಹುದ್ದೆಗಳ ಸಂಖ್ಯೆ ಮತ್ತು ಸಮತಳ ಮೀಸಲಾತಿ ರೋಸ್ಟರ್ ಬಿಂದು | ಅಂಗವಿಕಲತೆಯ ಸ್ವರೂಪ |
|---|---|---|
| ಸಾಮಾನ್ಯ ಅರ್ಹತೆ | ಹುದ್ದೆಗಳ ಸಂಖ್ಯೆ - 01<br>ರೋಸ್ಟರ್ ಬಿಂದು - 04 | ಅಂಧತ್ವ / ದೃಷ್ಟಿಮಾಂದ್ಯ |

**05. ಶೈಕ್ಷಣಿಕ ವಿದ್ಯಾರ್ಹತೆ:**

I. ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ 3 ವರ್ಷಗಳ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

II. ಸಾರ್ವಜನಿಕ ಶಿಕ್ಷಣ ಇಲಾಖೆ ನಡೆಸುವ ಕನ್ನಡ ಮತ್ತು ಆಂಗ್ಲ ಭಾಷೆಯ ಹಿರಿಯ ಶ್ರೇಣಿ ಬೆರಳಚ್ಚು ಮತ್ತು ಹಿರಿಯ ಶ್ರೇಣಿ ಶೀಘ್ರಲಿಪಿಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

III. ಕಛೇರಿ ಕಾರ್ಯಕಲಾಪಗಳಿಗೆ ಸಂಬಂಧಿಸಿದಂತೆ ಕಂಪ್ಯೂಟರ್ ಬಳಕೆ ಜ್ಞಾನ ಅವಶ್ಯಕವಾಗಿರುತ್ತದೆ.

**06. ವಯೋಮಿತಿ:**

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಠ ವಯೋಮಿತಿಯನ್ನು ಪೂರೈಸಿರಬೇಕು ಮತ್ತು ಗರಿಷ್ಠ ವಯೋಮಿತಿಯ ಒಳಗಿರಬೇಕು.

| ಕನಿಷ್ಠ ವಯೋಮಿತಿಃ | | 18 ವರ್ಷ |
|---|---|---|
| ಗರಿಷ್ಠ ವಯೋಮಿತಿಃ | ಸಾಮಾನ್ಯ ವರ್ಗ | 35+5* ವರ್ಷ |
| | ಪ್ರವರ್ಗ 2 ಎ, 2 ಬಿ, 3 ಎ ಮತ್ತು 3 ಬಿ | 38+5* ವರ್ಷ |
| | ಪ.ಜಾ, ಪ.ಪಂ, ಮತ್ತು ಪ್ರವರ್ಗ-1 | 40+5* ವರ್ಷ |

1. ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ಅನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

2. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 262 ಸೆನೆನಿ 2025, ದಿನಾಂಕ 29.01.2026 ರನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a onetime measure) 05 ವರ್ಷಗಳ ಸಡಿಲಿಕೆ ನೀಡಲಾಗುವುದು.

## 07. ಆಯ್ಕೆ ವಿಧಾನ:

ಅ) : ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2021 ರ ನಿಯಮಗಳನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

ಆ) : ಆಯ್ಕೆಗೆ ಕೌಶಲ ಪರೀಕ್ಷೆ ಮತ್ತು ಸಂದರ್ಶನವನ್ನು ಈ ಕೆಳಕಂಡಂತೆ ನಡೆಸಲಾಗುವುದು.

1. ನೇಮಕಾತಿ ಪ್ರಾಧಿಕಾರದಿಂದ ನೇಮಿಸಲಾದ ಪರೀಕ್ಷಕರು 1 ನಿಮಿಷಕ್ಕೆ 120 ಪದಗಳ ದರದಲ್ಲಿ ತಲಾ 5 ನಿಮಿಷಗಳ ಕನ್ನಡ ಮತ್ತು ಇಂಗ್ಲೀಷ್ ಉಕ್ತಲೇಖನವನ್ನು ನೀಡುವರು. ಅದನ್ನು ಅಭ್ಯರ್ಥಿಗಳು 45 ನಿಮಿಷಗಳಲ್ಲಿ ವಿಶೇಷ ತಂತ್ರಾಂಶದ ಗಣಕಯಂತ್ರದಲ್ಲಿ ಬೆರಳಚ್ಚು ಮಾಡತಕ್ಕದ್ದು. ಬೆರಳಚ್ಚು ಯಂತ್ರದ ಕೀಲಿಮಣೆಯನ್ನು ಹೋಲುವ ತಂತ್ರಾಂಶವನ್ನು ಗಣಕಯಂತ್ರಗಳಿಗೆ ಅಳವಡಿಸಲಾಗುವುದು.

2. ಕನ್ನಡ ಮತ್ತು ಆಂಗ್ಲ ಭಾಷಾ ಕೌಶಲ ಪರೀಕ್ಷೆಗಳಿಗೆ ತಲಾ ಗರಿಷ್ಠ 100 ಅಂಕಗಳನ್ನು ನಿಗದಿಪಡಿಸಲಾಗಿದ್ದು, ಉತ್ತೀರ್ಣರಾಗಲು ತಲಾ ಕನಿಷ್ಠ 50 ಅಂಕಗಳನ್ನು ಪಡೆಯಬೇಕಾಗಿರುತ್ತದೆ.

3. ನಿಗದಿಪಡಿಸಲಾದ ವಿದ್ಯಾರ್ಹತೆಯ ಪರೀಕ್ಷೆಗಳಲ್ಲಿನ ಮತ್ತು ಕೌಶಲ ಪರೀಕ್ಷೆಗಳ ಒಟ್ಟು ಅಂಕಗಳ ಶೇಕಡಾವಾರು ಮೊತ್ತದ ಆಧಾರದ ಮೇಲೆ ಮೀಸಲಾತಿಗನುಗುಣವಾಗಿ 1 ಹುದ್ದೆಗೆ 5 ಅಭ್ಯರ್ಥಿಗಳಂತೆ (1:5 ರ ಅನುಪಾತದಲ್ಲಿ) ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.

4. ಅರ್ಹತಾ ಪರೀಕ್ಷೆಗೆ ನಿಗದಿಪಡಿಸಿದ ಗರಿಷ್ಠ ಅಂಕಗಳ ಶೇಕಡ 5 ರಷ್ಟು ಅಂಕಗಳನ್ನು ಸಂದರ್ಶನದ ಅಂಕಗಳೆಂದು ನಿಗದಿಪಡಿಸಲಾಗಿರುತ್ತದೆ.

ಇ) : ಆಯ್ಕೆ ಪಟ್ಟಿ

ನಿಗದಿಪಡಿಸಿದ ವಿದ್ಯಾರ್ಹತೆಯ ಪರೀಕ್ಷೆಗಳಲ್ಲಿ ಪಡೆದ ಒಟ್ಟು ಅಂಕಗಳ ಶೇಕಡಾವಾರು, ಅರ್ಹತಾ ಪರೀಕ್ಷೆಯಲ್ಲಿ ಪಡೆದ ಅಂಕಗಳ ಶೇಕಡಾವಾರು ಮತ್ತು ಸಂದರ್ಶನದಲ್ಲಿ ಪಡೆದ ಅಂಕ ಇವುಗಳ ಮೊತ್ತದ ಜೇಷ್ಠತೆಯ ಆಧಾರದ ಮೇಲೆ ಆಯ್ಕೆ ಪಟ್ಟಿ ಸಿದ್ಧಪಡಿಸಲಾಗುವುದು.

## 08. ವಿಶೇಷ ಸೂಚನೆ:

ಆಯ್ಕೆಯಾದ ಅಭ್ಯರ್ಥಿಗಳು ರಾಷ್ಟ್ರೀಯ ಪಿಂಚಣಿ ಯೋಜನೆಗೆ (ಎನ್.ಪಿ.ಎಸ್.) ಒಳಪಡುತ್ತಾರೆ.

## 09. ಪರಿವೀಕ್ಷಣಾ ಅವಧಿ:

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977 ರ ಪ್ರಕಾರ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ, ಕನ್ನಡ ಭಾಷಾ ಪರೀಕ್ಷೆಯಲ್ಲಿ ಮತ್ತು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

**10. ನಿಗದಿತ ಶುಲ್ಕ ಮತ್ತು ಪಾವತಿಸುವ ವಿಧಾನ:**

| | ಶುಲ್ಕ |
|---|---|
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ರೂ. 200/- |
| ಪ್ರವರ್ಗ 2 ಎ, 2 ಬಿ, 3 ಎ, 3 ಬಿ ಅಭ್ಯರ್ಥಿಗಳಿಗೆ | ರೂ. 100/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಅಭ್ಯರ್ಥಿಗಳಿಗೆ ಹಾಗೂ ಅಂಗವಿಕಲ / ವಿಕಲಚೇತನ ಅಭ್ಯರ್ಥಿಗಳಿಗೆ | ಶುಲ್ಕ ಪಾವತಿಸುವುದರಿಂದ ವಿನಾಯಿತಿ ನೀಡಲಾಗಿದೆ |

ನಿಗದಿತ ಶುಲ್ಕವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲಾ ನ್ಯಾಯಾಲಯದ ವೆಬ್ ಸೈಟ್ **https://bengalururural.dcourts.gov.in/online-recruitment/** ನಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ State Bank Collect ಮೂಲಕ Online payment through Net Banking/Credit Card/Debit Card/UPI ID/QR Code ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ Demand Draft, Postal Order, Money Order, Challan ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಭರಿಸಿದ ನಂತರ ತಕ್ಷಣವೇ e-verify ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ನಿಗದಿತ ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಗಳು ಹಾಗೊಮ್ಮೆ ಅರ್ಜಿ ಸಂಖ್ಯೆಯನ್ನು ತಪ್ಪಾಗಿ ನಮೂದಿಸಿದ್ದಲ್ಲಿ ಅಥವಾ ಯಾವುದೇ ಕಾರಣಕ್ಕಾಗಿ ಶುಲ್ಕ ಪಾವತಿಯಾಗದಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ಹೊಣೆಯಾಗಿರುವುದಿಲ್ಲ ಮತ್ತು ಈ ಕುರಿತು ಯಾವುದೇ ಸಂವಹನಕ್ಕೆ ಅವಕಾಶವಿರುವುದಿಲ್ಲ.

**11. ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:**

1 : ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಲು ದಿನಾಂಕಃ **15.09.2026 ರ ರಾತ್ರಿ 11:59** ರ ವರೆಗೆ ಅವಕಾಶವಿರುತ್ತದೆ.

2 : ಅಭ್ಯರ್ಥಿಗಳು ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳಬೇಕು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3 : ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಜನ್ಮ ದಿನಾಂಕ, ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿ ವಿವರಗಳನ್ನು ಮಾತ್ರ ಪರಿಗಣಿಸಲಾಗುವುದು ಹಾಗೂ ಈ ಬಗ್ಗೆ ಅನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆಯನ್ನು ಪುರಸ್ಕರಿಸಲಾಗುವುದಿಲ್ಲ.

4 : ಅಭ್ಯರ್ಥಿಯು ಮೊಬೈಲ್ ಸಂಖ್ಯೆ ಹಾಗೂ ಇ-ಮೇಲ್ ಐಡಿಯನ್ನು ಕಡ್ಡಾಯವಾಗಿ ನಮೂದಿಸಬೇಕು. ಅರ್ಹ ಅಭ್ಯರ್ಥಿಗಳಿಗೆ ಎಸ್.ಎಂ.ಎಸ್. ಮತ್ತು ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗುವುದು.

5 : ವಿದ್ಯಾರ್ಹತೆ ಪರೀಕ್ಷೆಗಳ ಗರಿಷ್ಠ ಅಂಕಗಳನ್ನು ಹಾಗೂ ಗಳಿಸಿದ ಅಂಕಗಳನ್ನು ಸರಿಯಾಗಿ ನಮೂದಿಸತಕ್ಕದ್ದು. ಅಂಕಪಟ್ಟಿಗಳಲ್ಲಿ ಗ್ರೇಡ್ ಪಾಯಿಂಟ್ ಇದ್ದಲ್ಲಿ ಅದನ್ನು ಬದಲಿಸಿ ಸಂಬಂಧಿತ ಪರೀಕ್ಷಾ ಮಂಡಳಿ / ಪ್ರಾಧಿಕಾರದಿಂದ ಅಂಕಗಳಿಗೆ ಪರಿವರ್ತಿಸಿದ ಅಂಕಪಟ್ಟಿಗಳನ್ನು ಪಡೆಯತಕ್ಕದ್ದು ಹಾಗೂ ಅರ್ಜಿ ಸಲ್ಲಿಸುವಾಗ ಅಂಕಗಳನ್ನೇ ನಮೂದಿಸತಕ್ಕದ್ದು.

6 : ಶೀಘ್ರಲಿಪಿ ಮತ್ತು ಬೆರಳಚ್ಚು ಪರೀಕ್ಷೆಗೆ ಸಂಬಂಧಿಸಿದಂತೆ ಮೂರು ವರ್ಷಗಳ ಡಿಪ್ಲೊಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ನಮೂದಿಸುವಾಗ ಸರಿಯಾದ ವರ್ಷ / ಸೆಮಿಸ್ಟರ್ ಪರೀಕ್ಷೆಯ ಅಂಕಗಳನ್ನು ಖಾತ್ರಿಪಡಿಸಿಕೊಂಡು ನಮೂದಿಸತಕ್ಕದ್ದು.

7 : ಅಭ್ಯರ್ಥಿಯು ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು. ಭಾವಚಿತ್ರದ ಹಿನ್ನೆಲೆ ಬಿಳಿ ಬಣ್ಣದ್ದಾಗಿರಬೇಕು. ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು. (50 kb ಅಳತೆ ಮೀರಿರಬಾರದು ಹಾಗೂ .jpg ನಮೂನೆಯಲ್ಲಿರಬೇಕು)

8 : ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಬೇಕು (25 kb ಅಳತೆ ಮೀರಿರಬಾರದು ಹಾಗೂ .jpg ನಮೂನೆಯಲ್ಲಿರಬೇಕು)

9 : ಅಭ್ಯರ್ಥಿಯು ಆನ್‌ಲೈನ್ ಅರ್ಜಿಯಲ್ಲಿ ಕೇಳಲಾದ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿಮಾಡಿ ನಿಗದಿತ ಶುಲ್ಕ ಪಾವತಿಸಲು ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕ ಪಾವತಿಸಿದ ರಸೀದಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ/ಸಂದರ್ಶನದ/ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

10 : **ಅರ್ಜಿಯನ್ನು ಅಂತಿಮವಾಗಿ ಸಲ್ಲಿಸುವ ಮೊದಲು ಅಭ್ಯರ್ಥಿಯು ನಮೂದಿಸಲಾಗಿರುವ ಎಲ್ಲಾ ಮಾಹಿತಿಗಳು ಸರಿಯಾಗಿದೆಯೆಂದು ಖಚಿತಪಡಿಸಿಕೊಳ್ಳತಕ್ಕದ್ದು.**

11 : **ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸತಕ್ಕದ್ದಲ್ಲ. ಅರ್ಹ ಇರುವ ಎಲ್ಲಾ ಮೀಸಲಾತಿಗಳನ್ನು ಒಂದೇ ಅರ್ಜಿಯಲ್ಲಿ ಕೋರತಕ್ಕದ್ದು. ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಕೊನೆಯ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಈ ಬಗ್ಗೆ ಯಾವುದೇ ಬದಲಾವಣೆ ಕೋರಿಕೆಯನ್ನು ಪರಿಗಣಿಸುವುದಿಲ್ಲ.**

## 12. ಇತರೆ ಸೂಚನೆಗಳು:

1 : ಅರ್ಹ ಅಭ್ಯರ್ಥಿಗಳಿಗೆ ಎಸ್.ಎಂ.ಎಸ್./ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಒಂದು ವೇಳೆ ಎಸ್.ಎಂ.ಎಸ್. ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ.

2 : ಅರ್ಹತಾ ಪರೀಕ್ಷೆಗೆ ಮತ್ತು ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಹಾಗೂ ಅರ್ಹತಾ ಪರೀಕ್ಷೆಯ ಮತ್ತು ಸಂದರ್ಶನದ ವೇಳಾಪಟ್ಟಿಯನ್ನು ಈ ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

3 : ಅರ್ಹ ಅಭ್ಯರ್ಥಿಗಳು ಈ ನ್ಯಾಯಾಲಯದ ವೆಬ್‌ಸೈಟ್‌ನಿಂದ ಅರ್ಹತಾ ಪರೀಕ್ಷೆಯ ಪ್ರವೇಶಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳತಕ್ಕದ್ದು.

4 : ಅರ್ಹತಾ ಪರೀಕ್ಷೆಗೆ ಪ್ರವೇಶಪತ್ರವನ್ನು ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ.

5 : ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ವೋಟರ್ ಐಡಿ / ಆಧಾರ್ ಕಾರ್ಡ್/ ಡ್ರೈವಿಂಗ್ ಲೈಸನ್ಸ್ / ಪ್ಯಾನ್ ಕಾರ್ಡ್ / ಪಾಸ್‌ಪೋರ್ಟ್) ಅರ್ಹತಾ ಪರೀಕ್ಷೆಗೆ ಮತ್ತು ಸಂದರ್ಶನಕ್ಕೆ ಹಾಜರಾಗತಕ್ಕದ್ದು.

6 : ಅಭ್ಯರ್ಥಿಗಳು ಸಂದರ್ಶನದ / ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಈ ಕೆಳಕಂಡ ಮೂಲ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು:

i. ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ

ii. ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ರಶೀದಿ ಪ್ರತಿ

iii. ಜನ್ಮದಿನಾಂಕ ದಾಖಲೆ - ಎಸ್.ಎಸ್.ಎಲ್.ಸಿ. ಅಂಕಪಟ್ಟಿ / ಜನನ ಪ್ರಮಾಣ ಪತ್ರ

iv. ಶೈಕ್ಷಣಿಕ ವಿದ್ಯಾರ್ಹತೆ ದಾಖಲೆ - ಪಿ.ಯು.ಸಿ. / ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್, ಪ್ರೌಢ ದರ್ಜೆ ಕನ್ನಡ ಮತ್ತು ಇಂಗ್ಲೀಷ್ ಶೀಘ್ರಲಿಪಿ ಹಾಗೂ ಪ್ರೌಢ ದರ್ಜೆ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಪರೀಕ್ಷೆಗಳ ಸಂಬಂಧಿತ ಅಂಕಪಟ್ಟಿ / ಪ್ರಮಾಣ ಪತ್ರಗಳು

v. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ - ಡಿ ಯಲ್ಲಿ, ಪ್ರವರ್ಗ-1 ರ ಅಭ್ಯರ್ಥಿಗಳು ನಮೂನೆ - ಇ ಯಲ್ಲಿ ಮತ್ತು 2 ಎ, 2 ಬಿ, 3 ಎ ಮತ್ತು 3 ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ - ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳು, **ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ಪರಿಶಿಷ್ಟ ಜಾತಿಯ ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ ಗೆ ಸೇರಿರುವ ಬಗ್ಗೆ ಸೂಕ್ತ ಜಾತಿ ಪ್ರಮಾಣ ಪತ್ರ ಒದಗಿಸುವುದು.**

vi. ಗ್ರಾಮೀಣ / ಕನ್ನಡ ಮಾಧ್ಯಮ / ಮಾಜಿ ಸೈನಿಕ / ಅಂಗವಿಕಲ / ಯೋಜನಾ ನಿರಾಶ್ರಿತ / ತೃತೀಯಲಿಂಗ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣಪತ್ರಗಳು

vii. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ/96/ಸೇನನಿ/2005, ದಿನಾಂಕ 10.08.2005 ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಶಾಲಾ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುಸಹಿಯನ್ನು ಕಡ್ಡಾಯವಾಗಿ ಮಾಡಿಸಿ ಸಲ್ಲಿಸಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

viii. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2 ರ ಜೊತೆ ನಮೂನೆ-1 ರ ದೃಢೀಕೃತ ಪತ್ರವನ್ನು ಹೊಂದಿರಬೇಕು.

ix. ಅಂಗವಿಕಲ ಮೀಸಲಾತಿ ಕೋರುವ ಅಭ್ಯರ್ಥಿಗಳು ದಿನಾಂಕಃ 19.11.2005 ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆಃ ಸಿಆಸುಇ 115 ಸೇನೆನಿ 2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿನ ವೈದ್ಯಕೀಯ ಪ್ರಮಾಣಪತ್ರ (ಇತರೆ ನಮೂನೆಯ ಪ್ರಮಾಣಪತ್ರ / ಗುರುತಿನ ಚೀಟಿಗಳನ್ನು ಪರಿಗಣಿಸುವುದಿಲ್ಲ)

x. ವಿಧವೆಯರು, ಜೀತಕಾರ್ಮಿಕರು ಮತ್ತು ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ ಪಡೆದಿರಬೇಕು.

xi. ಮಾಜಿ ಸೈನಿಕ ವರ್ಗದ ಮೀಸಲಾತಿ ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ/ ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರ

xii. ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 06 ತಿಂಗಳ ಒಳಗೆ ಪಡೆದ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣಪತ್ರಗಳು ಹಾಗೂ ಅಭ್ಯರ್ಥಿಯು ಕೊನೆಯದಾಗಿ ಓದಿದ ವಿದ್ಯಾಸಂಸ್ಥೆಯಿಂದ ಪಡೆದ ನಡತೆ ಪ್ರಮಾಣಪತ್ರ

xiii. ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 19 ಎಸ್ ಆರ್ ಆರ್ 2020 ದಿನಾಂಕ 12.10.2022 ರ ಪ್ರಕಾರ ಸೇವಾನಿರತ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಆಯ್ಕೆಪಟ್ಟಿ ಪ್ರಕಟವಾದ 30 ದಿನಗಳೊಳಗೆ ಪಡೆದುಕೊಂಡು ಈ ನೇಮಕಾತಿ ಪ್ರಾಧಿಕಾರ ಸೂಚಿಸಿದಾಗ ಸಲ್ಲಿಸುವುದು

7 : ಮೇಲ್ಕಂಡ ದಾಖಲೆಗಳನ್ನು ಅರ್ಜಿ ಸಲ್ಲಿಸುವ ಮೊದಲೇ ಸಕ್ಷಮ ಪ್ರಾಧಿಕಾರಗಳಿಂದ ನಿಗದಿತ ನಮೂನೆಗಳಲ್ಲಿ ಪಡೆದಿರತಕ್ಕದ್ದು. ಎಲ್ಲಾ ಪ್ರಮಾಣಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು.

8 : ಅರ್ಹತಾ ಪರೀಕ್ಷೆಗೆ /ಸಂದರ್ಶನಕ್ಕೆ /ದಾಖಲಾತಿ ಪರಿಶೀಲನೆಗೆ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.

9 : ಈ ನೇಮಕಾತಿ ಸಂಬಂಧವಾಗಿ ಅಭ್ಯರ್ಥಿಗಳು ಈ ಕಚೇರಿಯೊಂದಿಗೆ ಯಾವುದೇ ಪತ್ರ-ವ್ಯವಹಾರ ನಡೆಸಲು ಆಸ್ಪದವಿರುವುದಿಲ್ಲ.

10 : ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವುದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವುದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವುದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವುದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾಗುವ ಪರಿಶೀಲನೆ/ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವುದು ಅಥವಾ ಅನುಸರಿಸಲು ಪ್ರಯತ್ನಿಸಿರುವುದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅವರ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು ಅಲ್ಲದೇ ಅಭ್ಯರ್ಥಿಯನ್ನು ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು.

**(ಬಿ.ಎಸ್. ರೇಖಾ)**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

10/18

**ಪ್ರತಿಯನ್ನು ಗೌರವಗಳೊಂದಿಗೆ ಮಾಹಿತಿಗಾಗಿ:**

ಮಾನ್ಯ ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಉಚ್ಚ ನ್ಯಾಯಾಲಯ, ಬೆಂಗಳೂರು

**ಪ್ರತಿಗಳು:**

1. ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ, ಬೆಂಗಳೂರು.
2. ಪ್ರಧಾನ ನಗರ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರು, ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು ಹಾಗೂ ಮುಖ್ಯ ನ್ಯಾಯಾಧೀಶರು, ಲಘುವ್ಯವಹಾರಗಳ ನ್ಯಾಯಾಲಯ, ಬೆಂಗಳೂರು-ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರದರ್ಶಿಸಲು ಕೋರಲಾಗಿದೆ.
3. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಚಾಮರಾಜನಗರ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ದಾವಣಗೆರೆ, ಧಾರವಾಡ, ಗದಗ, ಹಾಸನ, ಚಿತ್ರದುರ್ಗ, ಹಾವೇರಿ, ಕಲಬುರ್ಗಿ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ರಾಮನಗರ, ದಕ್ಷಿಣ ಕನ್ನಡ, ಶಿವಮೊಗ್ಗ, ತುಮಕೂರು, ಉಡುಪಿ, ಉತ್ತರ ಕನ್ನಡ, ವಿಜಯಪುರ, ಯಾದಗಿರಿ - ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರದರ್ಶಿಸಲು ಕೋರಲಾಗಿದೆ.
4. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು.
5. ಆಯುಕ್ತರು, ವಾರ್ತಾ ಇಲಾಖೆ, ನಂ. 17, ಭಗವಾನ್ ಮಹಾವೀರ ರಸ್ತೆ (ಇನ್‌ಫೆಂಟ್ರಿ ರಸ್ತೆ), ಬೆಂಗಳೂರು-560001.
6. ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಕೆಂಪೇಗೌಡ ರಸ್ತೆ, ಬೆಂಗಳೂರು-560009.
7. ಸಾಫ್ಟ್ ವೇರ್ ಟೆಕ್ನಿಷಿಯನ್, ಕಂಪ್ಯೂಟರ್ ವಿಭಾಗ, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬೆಂಗಳೂರು ಗ್ರಾಮಾಂತರ ಇವರಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ನ್ಯಾಯಾಲಯದ ಜಾಲತಾಣದಲ್ಲಿ ಪ್ರಕಟಣೆಗಾಗಿ ಹಾಗೂ ಕ್ರಮ ಸಂಖ್ಯೆ 1 ರಿಂದ 6 ರವರೆಗಿನ ನ್ಯಾಯಾಲಯಗಳಿಗೆ/ ಕಛೇರಿಗೆ ಇ-ಮೇಲ್ ಮೂಲಕ ಕಳುಹಿಸುವ ಸಲುವಾಗಿ.